24

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೃಷಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 3/6/2020

# 666 ಕೋಟಿ ರೂ. ಪರಿಹಾರ ರೈತರ ಖಾತೆಗೆ

ಉ.ವಾ 3/6/20

ಬೆಂಗಳೂರು: ಲಾಕ್‌ಡೌನ್ ಹಿನ್ನೆಲೆಯಲ್ಲಿ ಸಂಕಷ್ಟಕ್ಕೆ ಸಿಲುಕಿದ್ದ ಮೆಕ್ಕೆಜೋಳ ಹಾಗೂ ಹೂ ಬೆಳೆಗಾರರಿಗೆ ಪರಿಹಾರ ಘೋಷಿಸಿದ್ದ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಮಂಗಳವಾರ 666 ಕೋಟಿ ರೂ. ಪರಿಹಾರ ಮೊತ್ತವನ್ನು ರೈತರ ಖಾತೆಗೆ ಆನ್‌ಲೈನ್ ಮೂಲಕ ವರ್ಗಾವಣೆಗೆ ಚಾಲನೆ ನೀಡಿ, ಆಯ್ದ ರೈತರಿಗೆ ಕರೆ ಮಾಡಿ ಹಣ ವರ್ಗಾವಣೆಯಾಗಿರುವುದನ್ನು ಖಾತರಿಪಡಿಸಿಕೊಂಡರು.

ಗೃಹ ಕಚೇರಿ 'ಕೃಷ್ಣಾ'ದಲ್ಲಿ ಮಂಗಳವಾರ ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳ ಪ್ರಗತಿ ಪರಿಶೀಲಿಸಿ, ಎರಡೂ ಇಲಾಖೆಗಳ 100 ದಿನಗಳ ಪ್ರಗತಿ ವರದಿ ಬಿಡುಗಡೆ ಮಾಡಿದರು.

ಸಭೆಯಲ್ಲಿ ಮಾತನಾಡಿದ ಯಡಿಯೂರಪ್ಪ, ಕೋವಿಡ್-19 ಸಂದರ್ಭದಲ್ಲಿ 3 ತಿಂಗಳಿನಿಂದ ಹಾಪ್‌ಕಾಮ್ಸ್‌ನ 150 ನೌಕರರು ಕೆಲಸಕ್ಕೆ ಹಾಜರಾಗದಿರುವುದು ಗಂಭೀರವಾಗಿ ಪರಿಗಣಿಸಬೇಕು. ರಾಜ್ಯದ 550 ಹಾಪ್‌ಕಾಮ್ಸ್ ಮಳಿಗೆಗಳ ಪೈಕಿ ಕೇವಲ 250 ಮಳಿಗೆಗಳು ಕಾರ್ಯ ನಿರ್ವಹಿಸುತ್ತಿದ್ದು ಮಳಿಗೆ ತೆರೆಯದೇ ಇರುವವರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**ಮೆಕ್ಕೆಜೋಳ ಬೆಳೆದ 10 ಲಕ್ಷ ರೈತರು ಹಾಗೂ ಹೂವು, ಹಣ್ಣು ಬೆಳೆದ ರೈತರಿಗೆ 666 ಕೋಟಿ ರೂ. ಪರಿಹಾರ ಮಂಗಳವಾರ ಬಿಡುಗಡೆಯಾಗಿದೆ. ಮೆಕ್ಕೆಜೋಳ ಬೆಳೆಗಾರರಿಗೆ ತಲಾ 5000 ರೂ.ನಂತೆ 500 ಕೋಟಿ ರೂ. ಪರಿಹಾರ ವಿತರಿಸಲಾಗುತ್ತಿದೆ. ಹೂವು, ಹಣ್ಣು ಬೆಳೆದ ರೈತರಿಗೆ 166 ಕೋಟಿ ರೂ. ಪರಿಹಾರ ವಿತರಿಸಲಾಗುತ್ತಿದೆ. ರೈತರ ಸಂಕಷ್ಟಗಳ ಬಗ್ಗೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿತ್ತು. ವರದಿಯನ್ವಯ ಸರ್ಕಾರ ರೈತರ ಕಷ್ಟಕ್ಕೆ ಸ್ಪಂದಿಸಿದೆ.**

• ಬಿ.ಸಿ.ಪಾಟೀಲ್, ಕೃಷಿ ಸಚಿವ

ರಾಜ್ಯದಲ್ಲಿ ಉತ್ತಮ ಮಳೆಯಾಗಿದ್ದು ಕೆಲ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹುತೇಕ ನಿವಾರಣೆಯಾದಂತಾಗಿದೆ. ಹೊಸ ಕೊಳವೆ ಬಾವಿಗಳನ್ನು ಕೊರೆಯಲು ಅನುಮತಿ ನೀಡಬಾರದು. ಒಂದು ತಿಂಗಳ ಬಳಿಕ ಪರಿಸ್ಥಿತಿ ಅವಲೋಕಿಸಿ ತೀರ್ಮಾನಿಸುವುದು ಸೂಕ್ತ ಎಂದು ಹೇಳಿದರು.

ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಿಂದ ಇತರೆ ಇಲಾಖೆಗಳಿಗೆ ನಿಯೋಜನೆ ಮೇಲೆ ತೆರಳಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಯನ್ನು ಮಾತೃ ಇಲಾಖೆಗೆ ವಾಪಸ್ ಕರೆಸಿಕೊಳ್ಳಬೇಕು ಎಂದು ಸಿಎಂ ಸೂಚನೆ ನೀಡಿದರು. ರೇಷ್ಮೆ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ಸಿಎಂ, ಹಿಪ್ಪು ನೇರಳೆ ಬೆಳೆಯುವ ಪ್ರದೇಶ ವಿಸ್ತೀರ್ಣಕ್ಕೆ ಸಂಬಂಧಪಟ್ಟಂತೆ ಡ್ರೋಣ್ ಮೂಲಕ ಸಮೀಕ್ಷೆ ನಡೆಸಲಾಗುತ್ತಿದ್ದು, ಒತ್ತುವರಿಯಾಗಿರುವ ಸರ್ಕಾರಿ ಜಮೀನನ್ನು ಸರ್ಕಾರದ ಸುಪರ್ದಿಗೆ ಪಡೆದುಕೊಳ್ಳಬೇಕು ಎಂದು ಸೂಚನೆ ನೀಡಿದರು. ಸಚಿವ ಕೆ.ಸಿ. ನಾರಾಯಣಗೌಡ, ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯ ಭಾಸ್ಕರ್, ಆರ್ಥಿಕ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಐ.ಎಸ್.ಎನ್. ಪ್ರಸಾದ್, ಅಭಿವೃದ್ಧಿ ಆಯುಕ್ತರಾದ ವಂದಿತಾ ಶರ್ಮಾ, ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಉಪಸ್ಥಿತರಿದ್ದರು.